# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಕಲಘಟಗಿ

**ಸಿಸಿ ನಂ 223/2024**

**ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 26-03-2026 ರಂದು ಪ್ರಮಾಣ ಮಾಡಿಸಲಾಯಿತು**

| | | | |
|---|---|---|---|
| **ಸಾಕ್ಷಿಯ ಹೆಸರು** | ಃ ಯಲ್ಲಪ್ಪ ಗಿಡದಹುಬ್ಬಳ್ಳಿ | **ಪ್ರಾ.ಸಾ** ಃ 09 |
| **ತಂದೆ ಃ ಗಂಡ ಹೆಸರು** | ಃ ಮಹದೇವಪ್ಪ | **ಚಾ.ಸಾ** ಃ 12 |
| **ವಯಸ್ಸು** | ಃ 46 ವರ್ಷ | |
| **ಉದ್ಯೋಗ** | ಃ ವ್ಯವಸಾಯ | |
| **ವಾಸಸ್ಥಳ** | ಃ ತುಮರಿಕೊಪ್ಪ | |

**ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ**

ಚಾಸಾ-1 ನನ್ನ ಅಕ್ಕ, ಚಾಸಾ-6 ನನ್ನ ತಮ್ಮ. ಚಾಸಾ-13 ನನ್ನ ಮಗ. ಚಾಸಾ-4 ರಿಂದ 5, 7 ರಿಂದ 11, 14 ಮತ್ತು 15 ರವರ ಪರಿಚಯ ಇದೆ. ನನಗೆ ಆರೋಪಿತರ ಪರಿಚಯ ಇದೆ.

ದಿನಾಂಕ 07.03.2023 ರಂದು ಹೋಳಿ ಹಬ್ಬದ ದಿನದಂದು ಆರೋಪಿತರು ಓಕಳಿ ಆಡುತ್ತಾ ನಮ್ಮ ಓಣಿಯಲ್ಲಿ ಬಂದಿರುತ್ತಾರೆ. ಆ ಸಮಯದಲ್ಲಿ ನಾನು ಹಾಗೂ ಚಾಸಾ-15 ರವರು ಅಂಗಡಿ ಕಟ್ಟಿ ಮೇಲೆ ಕುಳಿತಿದ್ದೆವು. ಆರೋಪಿತರು ಬೇರೆ ಓಣಿಯಲ್ಲಿ ಚಾಸಾ-4 ರವರ ಜೊತೆಗೆ ಜಗಳ ಮಾಡಿದ್ದರು. ಅಲ್ಲಿ ಜಗಳ ಮುಗಿದ ನಂತರ ಚಾಸಾ-4 ರವರು ಅಂಗಡಿ ಹತ್ತಿರ ಬಂದಿರುತ್ತಾರೆ ಆಗ ಆರೋಪಿತರು ಕೂಡಾ ಅಲ್ಲಿ ಬಂದಿರುತ್ತಾರೆ. ಆರೋಪಿತರು ಚಾಸಾ-4 ರವರ ಮೇಲೆ ಮಾಡುವಾಗ ನಾವು ಬಿಡಿಸಲು ಹೋಗಿರುತ್ತೇವೆ. ನಾವು ಜಗಳ ಬಿಡಿಸಿ ಕಳುಹಿಸಿರುತ್ತೇವೆ. ಪುನಃ ಆರೋಪಿತರು ಮತ್ತೆ ಕೆಲವು ಜನರನ್ನು ಕರೆದುಕೊಂಡು ಸ್ಥಳಕ್ಕೆ ಬಂದಿರುತ್ತಾರೆ. ಆರೋಪಿತರು ಜಗಳ ಬಿಡಿಸಲು ನೀನು ಯಾರು ಎಂದು ನನ್ನ ಜೊತೆಗೆ ಜಗಳ ಮಾಡಿರುತ್ತಾರೆ. ನನ್ನ ಮೇಲೆ ಹಲ್ಲೆ ಮಾಡಲು ಬಂದಾಗ ಚಾಸಾ-1, 5 ರಿಂದ 11 ರವರು ಬಂದಿರುತ್ತಾರೆ. ಚಾಸಾ-14 ಮತ್ತು 15 ರವರು ಜಗಳ ಬಿಡಿಸಿ ಕಳುಹಿಸಿರುತ್ತಾರೆ, ಜಗಳದಲ್ಲಿ ನನ್ನ ಬಲಗೈ ಮುಂಗೈ ಮೇಲೆ ಕಲ್ಲಿನಿಂದ ಯಾರೂ ಹಲ್ಲೆ ಮಾಡಿದ್ದರು. ಈ ಬಗ್ಗ ನಾನು ಕಲಘಟಗಿ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದೇನೆ. ಜಗಳ ಬಿಡಿಸಲು ಚಾಸಾ-1 ರವರು ಬಂದಾಗ ಆರೋಪಿತರು ಎಲ್ಲರೂ ಸೇರಿ ಎಳೆದಾಡಿ, ಸೆರಗು ಹಿಡಿದು ಜಗ್ಗಾಡಿ ಎತ್ತಿ ಒಗೆದಿರುತ್ತಾರೆ. ಘಟನೆ ಬಗ್ಗ ಪೋಲೀಸರ ಮುಂದೆ ಹೇಳಿಕೆ ನೀಡಿದ್ದೇನೆ. ನನ್ನ ಮೇಲೆ ಹಲ್ಲೆ ಮಾಡಿದ ವ್ಯಕ್ತಿಗಳನ್ನು ನೋಡಿದರೆ ಗುರುತಿಸಿಸುತ್ತೇನೆ. ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ. ನಮ್ಮ ಮೇಲೆ ಹಲ್ಲೆಗೆ ಉಪಯೋಗಿಸಿದ ಕಟ್ಟಿಗೆ ಹಾಗೂ ಕಲ್ಲುಗಳನ್ನು ನೋಡಿದರೆ ಗುರುತಿಸುತ್ತೇನೆ. ಮುದ್ದೆಮಾಲು-1 ಮತ್ತು 2 ನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ.

*(ಮಾನ್ಯ ಸ.ಸ.ಅ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ,* ಪಾಟೀ ಸವಾಲಿಗೆ ಅನುಮತಿಸಿದೆ)

**ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ**

ನಮ್ಮ ಊರಿನ ಚರ್ಚ ಎದುರಿನ ರಸ್ತೆ ಮೇಲೆ ಜಗಳ ಆಗುತ್ತಿದ್ದು ನಾನು ಹಾಗೂ ಚಾಸಾ-5 ರಿಂದ 11 ಮತ್ತು 13 ರವರು ಜಗಳ ಬಿಡಿಸಲು ಹೋದಾಗ ಆರೋಪಿತರು ಜಗಳ

ಬಿಡಿಸಲು ನೀವು ಯಾರು ಇದರಲ್ಲಿ ಬರಬೇಡಿ ಎಂದು ನಮಗೆ ಅವಾಚ್ಯ ಶಬ್ದಗಳಿಂದ ಬೈದು ಕಳುಹಿಸಿರುತ್ತಾರೆ ಅಂದರೆ ನಿಜ. ಚಾಸಾ-8 ರವರು ತಂಟೆ ಮಾಡಬೇಡರಿ, ಎಲ್ಲರೂ ಸೇರಿಕೊಂಡು ಬಗೆಹರಿಸೋಣ ಎಂದು ಬುದ್ದಿವಾದ ಹೇಳಿದರೂ ಕೂಡಾ ಆರೋಪಿತರು ಕೇಳಲಿಲ್ಲ ಅಂದರೆ ನಿಜ. ಆರೋಪಿತರು ತಮ್ಮ ಕೈಗಳಲ್ಲಿ ಬಡಿಗೆ ಹಾಗೂ ಕಲ್ಲುಗಳನ್ನು ಹಿಡಿದುಕೊಂಡಿದ್ದು 1 ನೇ ಆರೋಪಿ ಚಾಸಾ-8 ರವರಿಗೆ ನಿನಗೆ ಸೊಕ್ಕು ಬಹಳ ಇದೆ ಸೂಳೆಮಗನೆ ಎಂದು ತನ್ನ ಕೈಯಲ್ಲಿದ್ದ ಕಲ್ಲಿನಿಂದ ಎದೆಗೆ ಹೊಡೆದಿರುತ್ತಾನೆ ಅಂದರೆ ನಿಜ. 1 ನೇ ಆರೋಪಿ ಜಗಳ ಬಿಡಿಸಲು ಬಂದ ಚಾಸಾ-5 ರವರಿಗೆ ಕಲ್ಲಿನಿಂದ ಕಾಲಿಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ನಿಜ. ಚಾಸಾ-6 ರವರ ತಲೆಗೆ 2 ನೇ ಆರೋಪಿ ಕಲ್ಲಿನಿಂದ ತಲೆಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ನಿಜ. ಉಳಿದ ಆರೋಪಿತರು ತಮ್ಮ ಕೈಗಳಿಂದ ಹೊಡಿ ಬಡಿ ಮಾಡಿರುತ್ತಾರೆ ಅಂದರೆ ನಿಜ.

2 ನೇ ಆರೋಪಿ ಚಾಸಾ-1 ರವರ ಸೀರೆ ಹಿಡಿದು ಎಳೆದಾಡಿ ಸಾರ್ವಜನಿಕವಾಗಿ ಮಾನಭಂಗ ಮಾಡಿರುತ್ತಾನೆ ಹಾಗೂ ಅವಾಚ್ಯ ಶಬ್ದಗಳಿಂದ ಬೈದಿರುತ್ತಾನೆ ಅಂದರೆ ನಿಜ. ಚಾಸಾ-11 ರವರಿಗೆ 5 ನೇ ಆರೋಪಿ ಬಡಿಗೆಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. ಉಳಿದ ಆರೋಪಿತರು ತಮ್ಮ ಕೈಯಿಂದ, ಬಡಿಗೆಯಿಂದ ಚಾಸಾ-6 ರವರ ಮೈಕೈಗಳಿಗೆ ಹಲ್ಲೆ ಮಾಡಿರುತ್ತಾರೆ ಅಂದರೆ ನಿಜ. 4 ನೇ ಆರೋಪಿ ಬಡಿಗೆಯಿಂದ ಚಾಸಾ-10 ರವರ ಮೈ ಕೈಗೆ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. 7 ನೇ ಆರೋಪಿಯು ತನ್ನ ಕೈಯಲ್ಲಿದ್ದ ಬಡಿಗೆ ಹಾಗೂ ಕೈಯಿಂದ ನನ್ನ ಮೇಲೆ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. 8 ಮತ್ತು 9 ನೇ ಆರೋಪಿತರು ಚಾಸಾ-13 ರವರ ಮೈಮೇಲೆ ತಮ್ಮ ಕೈಗಳಲ್ಲಿ ಇದ್ದ ಬಡಿಗೆ ಹಾಗೂ ಕೈಗಳಿಂದ ಹಲ್ಲೆ ಮಾಡಿರುತ್ತಾರೆ ಅಂದರೆ ನಿಜ. 1 ಮತ್ತು 2 ನೇ ಆರೋಪಿತರು ಚಾಸಾ-1 ರವರ ಮೈಮೇಲೆ ಹಲ್ಲೆ ಮಾಡಿ ಸೀರೆ ಹಿಡಿದು ಎಳೆದಾಡಿ ಮಾನಭಂಗ ಮಾಡಿರುತ್ತಾರೆ ಅಂದರೆ ನಿಜ. ಆರೋಪಿತರು ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದರು ಅಂದರೆ ನಿಜ. ಚಾಸಾ-14 ಮತ್ತು 15 ರವರು ಜಗಳ ಬಿಡಿಸಿಕೊಂಡಿರುತ್ತಾರೆ ಅಂದರೆ ನಿಜ. ಆರೋಪಿತರು ಹೋಗುವಾಗ ಈಗ ಉಳಿದುಕೊಂಡಿದ್ದಿರಿ ಇನ್ನೊಮ್ಮೆ ಸಿಕ್ಕರೆ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿರುತ್ತಾರೆ ಅಂದರೆ ನಿಜ. ಜಗಳ ಆದ ನಂತರ ನಾವು ಕಲಘಟಗಿ ಸರಕಾರಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದಿದ್ದೇವೆ ಅಂದರೆ ನಿಜ.

**ಪಾಟೀ ಸವಾಲುಃ ಆರೋಪಿತರ ಪರಃ**

ಪಾಟೀ ಸವಾಲಿಗೆ ಕಾಲಾವಕಾಶ ಕೋರುತ್ತಿದ್ದು ಕಾಲಾವಕಾಶ ನೀಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೆ ಸರಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು,**
**ಕಲಘಟಗಿ.**